## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಶ್ರೀನಿವಾಸರಾವ್ ಬಿ.ಎಸ್. ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ಅಮಾನತ್ತನ್ನು ತೆರವುಗೊಳಿಸುವ ಬಗ್ಗೆ - ಆದೇಶ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 108 ಇಎನ್ ಕ್ಯೂ 2021 ದಿನಾಂಕ: 17.11.2021
2. ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಬೆಳಗಾವಿ ಪೀಠ, ಅರ್ಜಿ ಸಂಖ್ಯೆ: 11273/2021ರ ಆದೇಶ ದಿನಾಂಕ: 09.02.2022

*****

**ಪ್ರಸ್ತಾವನೆ:**

ಶ್ರೀ ಶ್ರೀನಿವಾಸರಾವ್ ಬಿ.ಎಸ್. ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹಿರೇಕೆರೂರು ಇವರು 2020-21ನೇ ಸಾಲಿಗೆ ನರೇಗಾ ಯೋಜನೆಯಡಿ ಹಿರೇಕೆರೂರು ತಾಲ್ಲೂಕು, ಆಲದಗೇರಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಹಿರೇಬೂದಿಹಾಳ್ ಗ್ರಾಮದಲ್ಲಿ ಕೈಗೊಂಡಿರುವ ಆರು ಕಾಮಗಾರಿಗಳ ಪೈಕಿ ಮೂರು ಕಾಮಗಾರಿಗಳ ಎನ್.ಎಂ.ಆರ್. ನಲ್ಲಿ 2,17,839/- ರೂ.ಗಳಷ್ಟು ಹೆಚ್ಚುವರಿಯಾಗಿ ಪಾವತಿಯಾಗಿರುವುದು ತನಿಖಾ ಸಂದರ್ಭದಲ್ಲಿ ಕಂಡುಬಂದಿದೆಯೆಂದು ತಿಳಿಸಿ ಅವರ ವಿರುದ್ಧ ಶಿಸ್ತು ಕ್ರಮ ಜರುಗಿಸುವಂತೆ ಕೋರಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ ಇವರು ದಿನಾಂಕ: 27.09.2021ರ ಪತ್ರದ ಜೊತೆ ಸಲ್ಲಿಸಿದ್ದ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿ ಮೇಲೆ ಕ್ರಮ ಸಂಖ್ಯೆ: (1)ರಲ್ಲಿ ಓದಲಾದ ದಿನಾಂಕ: 17.11.2021ರ ಆದೇಶದಲ್ಲಿ ಶ್ರೀ ಶ್ರೀನಿವಾಸರಾವ್ ಬಿ.ಎಸ್. ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹಿರೇಕೆರೂರು ಇವರ ವಿರುದ್ಧದ ಶಿಸ್ತು ಕ್ರಮವನ್ನು ಬಾಕಿ ಇರಿಸಿ ಸೇವೆಯಿಂದ ಅಮಾನತ್ತುಪಡಿಸಲಾಗಿತ್ತು.

ಶ್ರೀ ಶ್ರೀನಿವಾಸರಾವ್ ಬಿ.ಎಸ್. ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ದಿನಾಂಕ: 17.11.2021ರ ಅಮಾನತ್ತು ಆದೇಶವನ್ನು ಪ್ರಶ್ನಿಸಿ ಮಾನ್ಯ ಕೆ.ಎ.ಟಿ., ಬೆಳಗಾವಿ ಪೀಠ, ಬೆಳಗಾವಿ ಇಲ್ಲಿ ಅರ್ಜಿ ಸಂಖ್ಯೆ: 11273/2021ನ್ನು ಸಲ್ಲಿಸಿರುತ್ತಾರೆ. ಸದರಿ ಅರ್ಜಿಗೆ ಸಂಬಂಧಿಸಿದಂತೆ ಮಾನ್ಯ ಬೆಳಗಾವಿ ಪೀಠವು ದಿನಾಂಕ: 09.02.2022ರಂದು ಈ ಕೆಳಕಂಡಂತೆ ಆದೇಶಿಸಿರುತ್ತದೆ:-

> " . . . . . . 7. ...... Learned counsel for the applicant ha urged that now the applicant has submitted a representation with all other details to Respondent No.1 and the same will satisfy Respondent No.1 that he can consider and revoke the order of suspension.
>
> 8. That being the position, without dwelling on the merits or legal aspects urged by the learned counsel for the applicant, Respondent No.1 is directed to consider the representation dated 18.12.2021 submitted by the applicant along with various documents and the facts with a request to revoke the order of suspension and to continue him

in service. Since the same is not considered I am of the opinion that the authorities will require to consider the representation bearing in mind the object of placing an employee under suspension and the decision referred to **supra** in this regard in the course of the order and take a decision, within two months from the date of receipt of copy of this order.

With these observations, the application if disposed of."

ಶ್ರೀ ಶ್ರೀನಿವಾಸರಾವ್ ಬಿ.ಎಸ್. ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಸರ್ಕಾರಕ್ಕೆ ಸಲ್ಲಿಸಿರುವ ಮನವಿಯಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ ಇವರು ಸಲ್ಲಿಸಿದ ವರದಿಯ ಕುರಿತು ತಮ್ಮಿಂದ ಯಾವುದೇ ವಿವರಣೆ ಪಡೆದಿಲ್ಲವೆಂದು, ಸದರಿ ಪ್ರಕರಣದಲ್ಲಿ ಹೆಚ್ಚುವರಿಯಾಗಿ ಪಾವತಿಸಲಾಗಿದೆಯೆಂದು ತಿಳಿಸಿರುವ ಮೊತ್ತವು ಕೂಲಿ ಕಾರ್ಮಿಕರ ಬ್ಯಾಂಕ್ ಖಾತೆಗೆ ಸಂದಾಯವಾಗಿದ್ದು, ಯಾವುದೇ ಹಣ ದುರುಪಯೋಗವಾಗಿಲ್ಲವೆಂದು, ಇದರಲ್ಲಿ ತಾವು ಯಾವುದೇ ದುರ್ನಡತೆ ಎಸಗಿಲ್ಲವೆಂದು ತಿಳಿಸಿ ತಮ್ಮ ಅಮಾನತ್ತನ್ನು ತೆರವುಗೊಳಿಸಿ ಸದರಿ ಹುದ್ದೆಯಲ್ಲಿಯೇ ಮುಂದುವರೆಸಬೇಕೆಂದು ಕೋರಿರುತ್ತಾರೆ.

ಸರ್ಕಾರವು ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಅರ್ಜಿ ಸಂಖ್ಯೆ: 11273/2021ರ ಆದೇಶ, ಶ್ರೀ ಶ್ರೀನಿವಾಸರಾವ್ ಬಿ.ಎಸ್. ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ಮನವಿ ಹಾಗೂ ಸದರಿ ಪ್ರಕರಣದ ವಿವರಗಳನ್ನು ಪರಿಶೀಲಿಸಿರುತ್ತದೆ. ಸದರಿ ಪ್ರಕರಣದಲ್ಲಿ ನರೇಗಾ ಯೋಜನೆಯ ಕಾಮಗಾರಿಗಳ ಅನುಷ್ಠಾನದಲ್ಲಿ ಹೆಚ್ಚುವರಿ ಹಣ ಪಾವತಿಸಿರುವ ಬಗ್ಗೆ ಪ್ರಸ್ತುತ ಅನುಷ್ಠಾನದ ಹಂತದಲ್ಲಿರುವ ಕಾಮಗಾರಿಗಳು ಪೂರ್ಣಗೊಂಡ ನಂತರ ಸಂಪೂರ್ಣ ಮಾಹಿತಿ / ಒಂದು ಅಂತಿಮ ವರದಿಯನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ ಇವರಿಂದ ಪಡೆದು ಪರಿಶೀಲಿಸಿ ನಂತರ ಸದರಿ ಅಧಿಕಾರಿಯ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವುದನ್ನು ಬಾಕಿ ಇಟ್ಟು ಸದರಿಯವರ ಅಮಾನತ್ತನ್ನು ತೆರವುಗೊಳಿಸಿ ಸೇವೆಗೆ ಪುನರ್ ಸ್ಥಾಪಿಸಿ ಸ್ಥಳನಿಯುಕ್ತಿಗೊಳಿಸಲು ಸರ್ಕಾರವು ನಿರ್ಧರಿಸಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ:

**ಆದೇಶ ಸಂಖ್ಯೆ. ಗ್ರಾಅಪ 108 ಇಎನ್ ಕ್ಯೂ 2021, ಬೆಂಗಳೂರು.**

**ದಿನಾಂಕ: 15.03.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಶ್ರೀನಿವಾಸರಾವ್ ಬಿ.ಎಸ್. ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ವಿರುದ್ಧದ ಶಿಸ್ತು ಕ್ರಮವನ್ನು ಬಾಕಿ ಇರಿಸಿ ಸದರಿಯವರ ಅಮಾನತ್ತನ್ನು ತಕ್ಷಣದಿಂದ ಜಾರಿಗೆ ಬರುವಂತೆ ತೆರವುಗೊಳಿಸಿ ಸೇವೆಗೆ ಪುನರ್ ಸ್ಥಾಪಿಸಿ ಸದರಿಯವರನ್ನು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗ, ಹಿರೇಕೆರೂರು ಇಲ್ಲಿನ ಖಾಲಿ ಹುದ್ದೆಗೆ ಸ್ಥಳನಿಯುಕ್ತಿಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

15/3

(ಕೆ.ನದೀಮ್ ಅಹ್ಮದ್).
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

15/03

ಇವರಿಗೆ:

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.

2. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ.
5. ಸಂಬಂಧಪಟ್ಟ ಅಧಿಕಾರಿಗೆ.
6. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ
7. ಯವರಿಗೆ.
8. ಗ್ರಾ.ಅ.ಪಂ.ರಾಜ್ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ / ಜಂಟಿ ಕಾರ್ಯದರ್ಶಿ (ಆಡಳಿತ-1) ಇವರುಗಳ ಆಪ್ತ ಕಾರ್ಯದರ್ಶಿ /ಆಪ್ತ ಸಹಾಯಕರಿಗೆ.
9. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ
10. ಪ್ರಕಟಿಸುವ ಸಲುವಾಗಿ
11. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.